ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ – ೨೨**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನೆಯ ಅಧಿವೇಶನ**

**(ಮುಂದುವರೆದ ಉಪವೇಶನ)**

**ಸೋಮವಾರ, ದಿನಾಂಕ: ೧೮ನೇ ಜುಲೈ, ೨೦೧೬**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

೨. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೩. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೪. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೫. ವೈದ್ಯಕೀಯ ಶಿಕ್ಷಣ ಸಚಿವರು

೬. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೭. ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು

---

## ಕೊಡಗು ಜಿಲ್ಲೆಯಲ್ಲಿ ಕೊರತೆಯಿರುವ ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೩೧೬ (೨೭೦೬) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ ; (ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

(ಆ) ಈ ಕೇಂದ್ರಗಳಿಗೆ ಮಂಜೂರಾದ ಅಂಗನವಾಡಿ ಶಿಕ್ಷಕಿ, ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳೆಷ್ಟು ; ಹಾಲಿ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

(ಇ) ೨೦೧೫-೧೬ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಎಷ್ಟು ಹೊಸ ಅಂಗನವಾಡಿ ಕೇಂದ್ರಗಳು ಮಂಜೂರಾಗಿವೆ ; ಇಲ್ಲದಿದ್ದಲ್ಲಿ, ಹೊಸ ಕೇಂದ್ರಗಳ ಸ್ಥಾಪನೆಗಾಗಿ ಕೋರಿ ಎಷ್ಟು ಪ್ರಸ್ತಾವನೆಗಳು ಸರ್ಕಾರಕ್ಕೆ ಸಲ್ಲಿಕೆಯಾಗಿವೆ ? (ತಾಲ್ಲೂಕುವಾರು ವಿವರಗಳನ್ನು ನೀಡುವುದು)

## ಎನ್.ಎ.ಬಿ.ಹೆಚ್. ಪ್ರಮಾಣ ಪತ್ರದ ಬಗ್ಗೆ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ):-**

೩೧೭ (೨೬೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗುಣಮಟ್ಟದ ಆರೋಗ್ಯ ಸೇವೆಗಾಗಿ ನೀಡಲಾಗುವ ಎನ್. ಎ. ಬಿ. ಹೆಚ್. ಪ್ರಮಾಣ ಪತ್ರ ಹೊಂದಿರುವ ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗಳು ಎಷ್ಟು ; ಮತ್ತು ಅವು ಯಾವುವು ;

(ಆ) ೨೦೧೩ರಲ್ಲಿ ಎನ್. ಎ. ಬಿ. ಹೆಚ್. ಪ್ರಮಾಣ ಪತ್ರ ಪಡೆಯಲು ಅರ್ಜಿ ಸಲ್ಲಿಸಿದ ಸರ್ಕಾರಿ ಆಸ್ಪತ್ರೆಗಳು ಯಾವುವು ;

(ಇ) ಈ ಸಂಬಂಧ ಆಸ್ಪತ್ರೆಗಳ ಚಿಕಿತ್ಸಾ ಗುಣಮಟ್ಟ ಪರೀಕ್ಷಿಸುವ ಸಂಸ್ಥೆಯು ಅರ್ಜಿ ಸಲ್ಲಿಸಿದ ಸರ್ಕಾರಿ ಆಸ್ಪತ್ರೆಗಳಿಗೆ ಕೆಲವು ಸುಧಾರಣೆಗಳನ್ನು ಕೈಗೊಳ್ಳುವಂತೆ ಸಲಹೆ ನೀಡಿರುವುದು ನಿಜವೇ ? (ವಿವರ ನೀಡುವುದು)

## ವಸತಿ ನಿಲಯಗಳಲ್ಲಿ ಸೋಲಾರ್ ವಾಟರ್ ಹೀಟರ್‌ಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೧೮ (೨೬೪೮) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ರಾಜ್ಯದ ಎಲ್ಲಾ ವಸತಿ ನಿಲಯಗಳಲ್ಲಿ ಸೋಲಾರ್ ವಾಟರ್ ಹೀಟರ್ ಮತ್ತು ಕುಡಿಯಲು ಶುದ್ಧ ನೀರಿನ ಘಟಕದ ವ್ಯವಸ್ಥೆಯನ್ನು ಅಳವಡಿಸಲಾಗಿದೆಯೇ ; ಇದ್ದಲ್ಲಿ, ಯಾವ ರೀತಿಯಲ್ಲಿ ಇವುಗಳನ್ನು ಖರೀದಿ ಮಾಡಲಾಗಿದೆ ;

(ಆ) ಇವುಗಳನ್ನು ಟೆಂಡರ್ ಮೂಲಕ ಖರೀದಿಸಿದ್ದರೆ, ಯಾವಾಗ ಟೆಂಡರ್ ಕರೆಯಲಾಗಿತ್ತು ; ಸೋಲಾರ್ ವಾಟರ್ ಹೀಟರ್ ಮತ್ತು ಕುಡಿಯಲು ಶುದ್ಧ ಕುಡಿಯುವ ನೀರಿನ ಪ್ರತಿಯೊಂದು ಘಟಕದ ವೆಚ್ಚವೆಷ್ಟು ; ಸರಬರಾಜು ಮಾಡಿದ ಸಂಸ್ಥೆ ಯಾವುದು ; ಇದಕ್ಕಾಗಿ ಕಳೆದ ೩ ವರ್ಷದಲ್ಲಿ ವಿನಿಯೋಗಿಸಿರುವ ಅನುದಾನವೆಷ್ಟು ; (ವರ್ಷಾವಾರು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ವಸತಿ ನಿಲಯಗಳಿಗೆ ಸರಬರಾಜು ಮಾಡಿರುವ ವಸ್ತುಗಳು ಯಾವ ಕಂಪನಿಗೆ ಸೇರಿರುತ್ತವೆ ಮತ್ತು ಯಾವ ಗುಣಮಟ್ಟದ್ದಾಗಿವೆ ; ಇವುಗಳು ಸಮರ್ಪಕವಾಗಿ ಕೆಲಸ ಮಾಡುತ್ತಿವೆಯೇ ; ಇದನ್ನು ವಸತಿ ನಿಲಯಗಳ ಮೇಲ್ವಿಚಾರಕರು ದೃಢೀಕರಿಸಿದ್ದಾರೆಯೇ?

## ಬೀದರ್ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಗಳ ಮೂಲಭೂತ ಸೌಲಭ್ಯ ಕೊರತೆ ಬಗ್ಗೆ

**ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೧೯ (೨೭೧೩) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ತಾಲ್ಲೂಕು ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಬೀದರ್ ಜಿಲ್ಲೆಯ, ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯ ಇಲ್ಲದೇ ರೋಗಿಗಳು ಪರದಾಡುವ ಪರಿಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಬೀದರ್ ಜಿಲ್ಲೆ, ಔರಾದ್ ತಾಲ್ಲೂಕಿನ ಕಮಲನಗರ ಆಸ್ಪತ್ರೆಯ ಕಾಮಗಾರಿ ಯಾವ ಹಂತದಲ್ಲಿದೆ ; ಕಾಮಗಾರಿ ಮುಕ್ತಾಯವಾಗಿದ್ದರೆ ಈ ಆಸ್ಪತ್ರೆಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು?

## ಚಿಕ್ಕಮಗಳೂರು ಜಿಲ್ಲೆಯಲ್ಲಿ ಪರಿಶಿಷ್ಟ ವರ್ಗಗಳ ಸದಸ್ಯರಿಗೆ ಸ್ವಯಂ ಉದ್ಯೋಗಕ್ಕಾಗಿ ಒದಗಿಸಲಾದ ಅನುದಾನದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು)**:–

೩೨೦ (೨೭೯೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಪರಿಶಿಷ್ಟ ವರ್ಗಗಳ ಕುಟುಂಬದ ಸದಸ್ಯರಿಗೆ ಸ್ವಯಂ ಉದ್ಯೋಗಕ್ಕಾಗಿ ಸರ್ಕಾರವು ಯಾವ ಯಾವ ಸೌಲಭ್ಯಗಳನ್ನು ನೀಡುತ್ತಿದೆ ; ಈ ಬಗ್ಗೆ ಒದಗಿಸಲಾದ ಅನುದಾನ ಎಷ್ಟು ;

(ಆ) ಸದರಿ ಜಿಲ್ಲೆಯಲ್ಲಿ ಪರಿಶಿಷ್ಟ ವರ್ಗದವರಿಗಾಗಿ ಕುಡಿಯುವ ನೀರಿಗಾಗಿ ಎಷ್ಟು ಕೊಳವೆ ಬಾವಿಗಳನ್ನು ನಿರ್ಮಿಸಲಾಗಿದೆ ; ಈ ವರ್ಗದ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಸದರಿ ಜಿಲ್ಲೆಗಳಲ್ಲಿ ಪರಿಶಿಷ್ಟ ವರ್ಗಗಳ ಕಾಲೋನಿಗಳಲ್ಲಿ ಈವರೆಗೆ ಎಷ್ಟು ರಸ್ತೆಗಳಿಗೆ ಕಾಂಕ್ರೀಟ್ ಟಾರ್ ರಸ್ತೆ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಎಲ್ಲೆಲ್ಲಿ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಕ್ರೈಸ್ ಮೊರಾರ್ಜಿ ಹಾಗೂ
## ರಾಣಿ ಚನ್ನಮ್ಮ ಶಾಲೆಗಳ ಶಿಕ್ಷಕರ ಸಕ್ರಮಾತಿಯ ಕುರಿತು

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ):–**

೩೨೧ (೨೭೨೮) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೊರಾರ್ಜಿ ದೇಸಾಯಿ ಮತ್ತು ರಾಣಿ ಚನ್ನಮ್ಮ ಶಾಲೆಗಳಿಗೆ ಈ ಹಿಂದೆ ಎನ್.ಜಿ.ಓ. ಗಳ ಮೂಲಕ ನೇಮಕವಾಗಿದ್ದ ಶಿಕ್ಷಕರ ಸಕ್ರಮಾತಿಯ ಕುರಿತು ಸರ್ಕಾರದ ನಿಲುವೇನು ;

(ಆ) ಈ ಪ್ರಸ್ತಾವನೆಯು ಈಗ ಯಾವ ಹಂತದಲ್ಲಿದೆ ; ಸಕ್ರಮಗೊಳಿಸುತ್ತಿರುವ ಶಿಕ್ಷಕರ ಪಟ್ಟಿ ನೀಡುವುದು ;

(ಇ) ಸಕ್ರಮಗೊಳ್ಳದೇ ಇರುವವರ ಪಟ್ಟಿ ನೀಡುವುದು ;

(ಈ) ಈ ಹಿಂದೆ ಕ್ರೈಸ್ ಸಂಸ್ಥೆ ಅಲ್ಪಸಂಖ್ಯಾತ ಮೊರಾರ್ಜಿ ಹಾಗೂ ರಾಣಿ ಚನ್ನಮ್ಮ ಶಾಲೆಗಳಿಗೆ ಎನ್.ಜಿ.ಓ. ಮೂಲಕ ನೇಮಕಾತಿ ಮಾಡಿದ್ದ ಶಿಕ್ಷಕರ ಸೇವಾ ಸಕ್ರಮಾತಿ ಕುರಿತು ಸರ್ಕಾರದ ಕ್ರಮವೇನು ?

## ಕೌಟುಂಬಿಕ ಕಲಹಗಳಿಂದ ನೊಂದ ಮಹಿಳೆಯರ ಸಾಂತ್ವನದ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೨೨ (೨೭೨೫) ಮಹಿಳಾ ಮತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೌಟುಂಬಿಕ ಕಲಹಗಳ ಹಿನ್ನಲೆಯಲ್ಲಿ ಹೆಚ್ಚು ಹೆಚ್ಚು ಡೈವೋರ್ಸ್ ಕೇಸ್‌ಗಳು ದಾಖಲಾಗುತ್ತಿರುವ ವಿಚಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಆ) ಹಾಗಿದ್ದಲ್ಲಿ, ಮಹಿಳೆಯರ ಆತ್ಮ ಸ್ಥೈರ್ಯ ತುಂಬಿ ನೊಂದ ಮಹಿಳೆಯರಿಗೆ ಸಾಂತ್ವಾನ ನೀಡಲು ಯಾವ ಕಾರ್ಯಕ್ರಮಗಳನ್ನು ರೂಪಿಸಿದೆ ; ಈ ನಿಟ್ಟಿನಲ್ಲಿ ಸಾಂತ್ವಾನ ಕೇಂದ್ರಗಳನ್ನು ಸ್ಥಾಪಿಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಇ) ನುರಿತ ಮಾನಸಿಕ ತಜ್ಞರಿಂದ ಪತಿ ಹಾಗೂ ಪತ್ನಿ ಇಬ್ಬರಿಗೂ ಈ ಸಾಂತ್ವಾನ ಕೇಂದ್ರಗಳಲ್ಲಿ ಕೌನ್ಸಿಲಿಂಗ್ ನಡೆಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಈ) ಹಾಲಿ ಕಾರ್ಯನಿರ್ವಹಿಸುತ್ತಿರುವ ಮಧ್ಯಸ್ಥಿಕೆ ಕೇಂದ್ರಗಳ ರಚನೆ, ಕಾರ್ಯವಿಧಾನ ಮತ್ತು ಅದರ ನಿರ್ವಹಣೆ ಹೇಗೆ ನಡೆಯುತ್ತಿದೆ ; (ವಿವರ ನೀಡುವುದು) ೨೦೧೫–೧೬ರಲ್ಲಿ ಎಷ್ಟು ಪ್ರಕರಣಗಳನ್ನು ಮಧ್ಯಸ್ಥಿಕೆಯಿಂದ ತೀರ್ಮಾನಿಸಲಾಗಿದೆ ;

(ಉ) ಈ ರೀತಿ ಅಸಹಾಯಕರಾದ ಮಹಿಳೆಯರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ವಿಚಾರದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ? (ವಿವರ ನೀಡುವುದು)

## ಪಡಿತರ ಚೀಟಿಗೆ ಆಧಾರ್ ಕಾರ್ಡ್ ಕಡ್ಡಾಯ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)**:–

೩೨೩ (೨೭೦೫) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಡಿತರ ಚೀಟಿಗೆ ಆಧಾರ್ ಕಾರ್ಡ್ ಲಿಂಕ್ ಕಡ್ಡಾಯಗೊಳಿಸಲಾಗಿದೆಯೇ ; ಇದ್ದಲ್ಲಿ, ಅದಕ್ಕೆ ಕಾರಣವೇನು ; (ಆದೇಶದ ಪ್ರತಿ ನೀಡುವುದು)

(ಆ) ಈವರೆಗೆ ಎಷ್ಟು ಪಡಿತರ ಚೀಟಿಗಳಿಗೆ ಆಧಾರ್ ಕಾರ್ಡ್ ಲಿಂಕ್ ಮಾಡಲಾಗಿದೆ ; ಬಾಕಿ ಉಳಿದ ಪಡಿತರ ಚೀಟಿಗಳೆಷ್ಟು ; ಬಾಕಿ ಪಡಿತರ ಚೀಟಿಗಳಿಗೆ ಆಧಾರ್ ಕಾರ್ಡ್ ಲಿಂಕ್ ಮಾಡುವ ಕಾರ್ಯ ಯಾವ ಹಂತದಲ್ಲಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಆಧಾರ್ ಕಾರ್ಡ್ ಲಿಂಕ್ ಮಾಡುವ ವಿಚಾರದಲ್ಲಿ ಹಲವು ಗೊಂದಲಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಗ್ರಾಮೀಣ ಪ್ರದೇಶಗಳಲ್ಲಿ ಮಾಹಿತಿ ಕೊರತೆಯಿಂದಾಗಿ ಜನರು ಪಡಿತರ ಚೀಟಿಗೆ ಆಧಾರ್ ಕಾರ್ಡ್ ಲಿಂಕ್ ಮಾಡಲು ಅಸಾಧ್ಯವಾಗಿರುವುದು ನಿಜವೇ ; ಹಾಗಿದ್ದಲ್ಲಿ, ಈ ಗೊಂದಲಗಳನ್ನು ಬಗೆಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಆಧಾರ್ ಕಾರ್ಡ್ ಲಿಂಕ್ ಮಾಡದಿದ್ದಲ್ಲಿ, ಪಡಿತರ ವಿತರಣೆಯನ್ನು ತಡೆಹಿಡಿಯಲು ಸೂಚನೆ ನೀಡಲಾಗಿದೆಯೇ ; ಆಧಾರ್ ಕಾರ್ಡ್ ಕುರಿತು ಸುಪ್ರೀಂಕೋರ್ಟ್ ನೀಡಿರುವ ಆದೇಶ ಸರ್ಕಾರದ ಗಮನಕ್ಕೆ ಬಂದಿದೆಯೇ ; ನ್ಯಾಯಾಲಯದ ಆದೇಶದ ಪ್ರಮುಖ ಅಂಶಗಳೇನು ?

## ೩೭೧(ಜೆ) ಅಡಿಯಲ್ಲಿ ಸ್ಥಾಪನೆಗೊಂಡ ಹೆಚ್.ಕೆ.ಆರ್.ಡಿ.ಬಿ. ಅನುಷ್ಠಾನದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):-**

೩೨೪ (೨೭೪೦) ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೩೭೧(ಜೆ) ಅಡಿಯಲ್ಲಿ ಸ್ಥಾಪನೆಗೊಂಡ ಹೆಚ್.ಕೆ.ಆರ್.ಡಿ.ಬಿ.ಗೆ ಇಲ್ಲಿಯವರೆಗೆ ಸರ್ಕಾರದಿಂದ ಘೋಷಣೆ ಮಾಡಿರುವ ಮೊತ್ತ ಎಷ್ಟು ; ಆ ಪೈಕಿ ವಾಸ್ತವಿಕವಾಗಿ ಬಿಡುಗಡೆ ಮಾಡಿದ ಮೊತ್ತ ಎಷ್ಟು ;

(ಆ) ಹೆಚ್.ಕೆ.ಆರ್.ಡಿ.ಬಿ. ಯಿಂದ ಅನುಷ್ಠಾನಕ್ಕೆ ಇಲಾಖೆಗೆ ಬಿಡುಗಡೆ ಮಾಡಿದ ಮೊತ್ತ ಎಷ್ಟು ; ಆ ಪೈಕಿ ಇಲಾಖೆಯಿಂದ ಆದ ಖರ್ಚು ಎಷ್ಟು ; (ಜಿಲ್ಲಾವಾರು ವರ್ಷವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಹೆಚ್.ಕೆ.ಆರ್.ಡಿ.ಬಿ. ಯಿಂದ ಮಾನವ ಸಂಪನ್ಮೂಲ ಅಭಿವೃದ್ಧಿಗಾಗಿ ಕೈಗೊಂಡ ಕಾರ್ಯಕ್ರಮಗಳೇನು ; (ವಿವರ ನೀಡುವುದು)

(ಈ) ಹೆಚ್.ಕೆ.ಆರ್.ಡಿ.ಬಿ. ಯಿಂದ ಹೈದರಾಬಾದ್ ಕರ್ನಾಟಕ ಪ್ರದೇಶದಲ್ಲಿ ಸ್ಥಾಪನೆಗೊಂಡ ವಿಶ್ವವಿದ್ಯಾಲಯಗಳಿಗೆ ಅನುದಾನ ಒದಗಿಸಲಾಗಿದೆಯೇ ? (ವಿಶ್ವವಿದ್ಯಾಲಯವಾರು, ಯೋಜನೇವಾರು ಮಾಹಿತಿ ನೀಡುವುದು)

## ಡಾ: ಎ. ರಾಮಚಂದ್ರ ಭೈರಿ ಹಾಗೂ ಶ್ರೀಮತಿ ಕೆ. ನೀಲಾ ಇವರ ನೇತೃತ್ವದಲ್ಲಿ ಸಲ್ಲಿಸಲಾಗಿರುವ ವರದಿಯಲ್ಲಿನ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು)**:–

೩೨೫ (೨೬೦೩) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವೈದ್ಯರ ಧನದಾಹದಿಂದ ಸಾವಿರಾರು ಮಹಿಳೆಯ ಗರ್ಭಕೋಶಗಳನ್ನು ತೆಗೆದು ಹಾಕಿರುವ ಪ್ರಕರಣಗಳು ರಾಜ್ಯದಲ್ಲಿ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಬಗ್ಗೆ ಪರಿಶೀಲಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಡಾ: ಎ. ರಾಮಚಂದ್ರ ಭೈರಿ ನೇತೃತ್ವದಲ್ಲಿ ಮತ್ತು ರಾಜ್ಯ ಮಹಿಳಾ ಆಯೋಗವು ಶ್ರೀಮತಿ ಕೆ. ನೀಲಾ ನೇತೃತ್ವದಲ್ಲಿ ಸಮಿತಿಗಳನ್ನು ರಚಿಸಿರುವುದು ನಿಜವೇ ;

(ಇ) ಈ ಎರಡೂ ಸಮಿತಿಗಳು ವರದಿ ನೀಡಿವೆಯೇ, ನೀಡಿದ್ದಲ್ಲಿ, ಈ ವರದಿಯಲ್ಲಿ ಅಡಕವಾಗಿರುವ ಅಂಶಗಳ ಶಿಫಾರಸ್ಸುಗಳಾವುವು ;

(ಈ) ಈ ಎರಡೂ ಸಮಿತಿಗಳ ವರದಿಯ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ವೈದ್ಯರು ಧನದಾಹಕ್ಕಾಗಿ ಮಹಿಳೆಯ ಗರ್ಭಕೋಶಗಳನ್ನು ತೆಗೆದಿರುವ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಉತ್ತರ ಕನ್ನಡ ಜಿಲ್ಲೆಯಲ್ಲಿ ಸರ್ಕಾರಿ ಆಸ್ಪತ್ರೆಯಲ್ಲಿ "ವೆಂಟಿಲೇಟರ್" ಕೊರತೆ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**:–

೩೨೬ (೨೬೫೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯಲ್ಲಿ ತುರ್ತು ಸಂದರ್ಭದಲ್ಲಿ ಅಗತ್ಯವಾದ "ವೆಂಟಿಲೇಟರ್" ಸೌಲಭ್ಯವು ಜಿಲ್ಲೆಯ ಬೆರಳೆಣಿಕೆಯಷ್ಟು ಆಸ್ಪತ್ರೆಗಳಲ್ಲಿ ಮಾತ್ರ ಲಭ್ಯವಿದ್ದು, ಈ ಯಂತ್ರದ ನಿರ್ವಹಣೆಯನ್ನು ಮಾಡುವ ತಂತ್ರಜ್ಞರ ಕೊರತೆಯಿದ್ದು, ತುರ್ತು ಚಿಕಿತ್ಸೆಗಾಗಿ ಹೊರ ಜಿಲ್ಲೆಗಳ ಆಸ್ಪತ್ರೆಗಳನ್ನೇ ಆಶ್ರಯಿಸಬೇಕಾದ ಅನಿವಾರ್ಯ ಪರಿಸ್ಥಿತಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಈಗಾಗಲೇ ಜಿಲ್ಲಾ ಆಸ್ಪತ್ರೆ ಕಾರವಾರದಲ್ಲಿ ಅವಶ್ಯವಾದ "ವೆಂಟಿಲೇಟರ್" ಇದ್ದರೂ, ಅದನ್ನು ಸಾರ್ವಜನಿಕರಿಗೆ ಯಾಕೆ ಉಪಯೋಗಿಸಲು ಅವಕಾಶ ಮಾಡಿಕೊಡುತ್ತಿಲ್ಲ ; ಇದಕ್ಕೆ ಯಾರು ಹೊಣೆಗಾರರು ; (ವಿವರ ನೀಡುವುದು)

(ಇ) ಜಿಲ್ಲೆಯ ಜನರ ಹಿತದೃಷ್ಠಿಯಿಂದ ಕೂಡಲೇ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಸಾರ್ವಜನಿಕರಿಗೆ ಅಗತ್ಯವಾಗಿರುವ "ವೆಂಟಿಲೇಟರ್"ಗೆ ಸಂಬಂಧಿಸಿದ ತಂತ್ರಜ್ಞರ/ಸಿಬ್ಬಂದಿಗಳ ವ್ಯವಸ್ಥೆ ಮಾಡಲಾಗುವುದೇ ;

(ಈ) ಹಾಗಿದ್ದಲ್ಲಿ, ಎಷ್ಟು ದಿನದಲ್ಲಿ ಈ ವ್ಯವಸ್ಥೆ ಮಾಡಿಕೊಡಲಾಗುವುದು ? (ವಿವರ ನೀಡುವುದು)

## ಮಾನ್ವಿ ತಾಲ್ಲೂಕಿನ ಪೋತ್ನಾಳ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ಬಗ್ಗೆ

**ಶ್ರೀ ಎಸ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)**:–

೩೨೭ (೨೭೨೩) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾನ್ವಿ ತಾಲ್ಲೂಕಿನ ಪೋತ್ನಾಳ (Pothnal) ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರ (PHC)ವು ಜನರ ಆಕ್ರೋಶಕ್ಕೆ ಧ್ವಂಸವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಜಿಲ್ಲೆಯಲ್ಲಿರುವ ವೈದ್ಯರುಗಳ ಕೊರತೆ ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಖಾಲಿ ಇರುವ ವೈದ್ಯರ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಔಷಧಿ ಖರೀದಿ ಅಕ್ರಮದ ಆರೋಪದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೨೮ (೨೬೭೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ಔಷಧಿ ಖರೀದಿಯಲ್ಲಿ ಅವ್ಯವಹಾರ ಆಗಿರುವುದು ನಿಜವೇ ; (ವಿವರ ನೀಡುವುದು)

(ಆ) ಸರ್ಕಾರದಿಂದ "ರಾಜ್ಯ ಆರೋಗ್ಯ ಅಭಿಯಾನ ಮಂಡಳಿ"ಯಿಂದ ಖರೀದಿ ಮಾಡಲಾದ ಔಷಧಗಳಾವುವು ; ಯಾವ ಕಂಪನಿಯ ಯಾವ ಔಷಧಿಗಳನ್ನು ಯಾವ ದರದಲ್ಲಿ ಖರೀದಿಸಲಾಗಿದೆ ; ಖರೀದಿಸಿದ ಒಟ್ಟು ಪ್ರಮಾಣ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಕೇಂದ್ರ ಸರ್ಕಾರದ "ರಾಷ್ಟ್ರೀಯ ಆರೋಗ್ಯ ಅಭಿಯಾನ"ಕ್ಕಾಗಿ ಬಿಡುಗಡೆಯಾದ ಅನುದಾನ ಎಷ್ಟು ; ಯಾವ ಯಾವ ಉದ್ದೇಶಗಳಿಗೆ ಅನುದಾನ ಉಪಯೋಗಿಸಲಾಗಿದೆ ; (ವಿವರ ನೀಡುವುದು)

(ಈ) ಔಷಧಿ ಖರೀದಿ ಅಕ್ರಮದ ಆರೋಪದ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ನೀಡುವುದು)

## ಹುಬ್ಬಳ್ಳಿಯ ಸವಾಯಿ ಗಂಧರ್ವ ಹಾಲ್‌ನ ದುರಸ್ಥಿ ಕಾರ್ಯವನ್ನು ಪೂರ್ಣಗೊಳಿಸುವ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-**

೩೨೯ (೨೬೩೮) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹುಬ್ಬಳ್ಳಿಯಲ್ಲಿರುವ ಸವಾಯಿ ಗಂಧರ್ವ ಹಾಲ್‌ನ ನವೀಕರಣ ಕಾರ್ಯದ ನಿಮಿತ್ತ ನಾಲ್ಕೈದು ವರ್ಷಗಳಿಂದ ಬಂದ್ ಮಾಡಿರುವುದು ನಿಜವೇ ;

(ಆ) ಹಾಲ್‌ನ ನವೀಕರಣ ಕಾರ್ಯ ಈಗ ಯಾವ ಹಂತದಲ್ಲಿದೆ ; ಮತ್ತು ಈ ಕಾರ್ಯಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ನವೀಕರಣ ಕಾರ್ಯವನ್ನು ಯಾವ ಸಂಸ್ಥೆಯವರಿಗೆ ವಹಿಸಲಾಗಿದೆ ; ಹಾಗೂ ನಿಗಧಿಪಡಿಸಿದ ಕಾಲಾವಧಿ ಎಷ್ಟು ;

(ಈ) ಈ ಕಾರ್ಯವು ಹಣಕಾಸಿನ ಕೊರತೆಯಿಂದ ವಿಳಂಬವಾಗುತ್ತಿರುವುದು ನಿಜವೇ ;

(ಉ) ನವೀಕರಣದ ವಿಳಂಬದಿಂದಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಿದ್ದಲ್ಲಿ, ದುರಸ್ಥಿ ಕಾರ್ಯವನ್ನು ಪೂರ್ಣಗೊಳಿಸಿ, ಕಲಾ ಚಟುವಟಿಕೆಗಳಿಗೆ ಸವಾಯಿ ಗಂಧರ್ವ ಹಾಲ್‌ನ್ನು ಮರು ಪ್ರಾರಂಭಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ ?

## ಶ್ರೀ ಕ್ಷೇತ್ರ ಹೊರನಾಡುವಿನಲ್ಲಿ ಆಸ್ಪತ್ರೆ ಇಲ್ಲದೇ ಇರುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೩೦ (೨೭೦೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಶ್ರೀ ಕ್ಷೇತ್ರ ಹೊರನಾಡು ಅನ್ನಪೂರ್ಣೇಶ್ವರಿ ಪುಣ್ಯ ಸ್ಥಳದಲ್ಲಿ ಆಸ್ಪತ್ರೆ, ಪ್ರಥಮ ಚಿಕಿತ್ಸೆ ಘಟಕ ಮತ್ತು ವೈದ್ಯರು ಇಲ್ಲದೆ ಭಕ್ತಾಧಿಗಳಿಗೆ ಪ್ರವಾಸಿಗರಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು ;

(ಆ) ಹೊರನಾಡು ಶ್ರೀ ಕ್ಷೇತ್ರದಲ್ಲಿ ಭಕ್ತಾಧಿಗಳಿಗೆ, ಪ್ರವಾಸಿಗರಿಗೆ ಮತ್ತು ಸಾರ್ವಜನಿಕರಿಗೆ ಏನೇ ತೊಂದರೆಯಾದರೂ ಸುಮಾರು ೧೦ ಕಿ.ಮೀ ದೂರದ ಕಳಸಾ ಗ್ರಾಮಕ್ಕೆ ಬರಬೇಕಾದ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹೊರನಾಡು ಶ್ರೀ ಕ್ಷೇತ್ರಕ್ಕೆ ಒಂದು ಆಸ್ಪತ್ರೆ, ಔಷಧ ಘಟಕ ಮತ್ತು ಸಿಬ್ಬಂದಿಯನ್ನು ಯಾವ ಕಾಲಮಿತಿಯಲ್ಲಿ ಒದಗಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಕಾ.ಸೂ. 363 – ಪಿ8 – 1500 ಪ್ರತಿಗಳು